ಅಧ್ಯಕ್ಷರು : ಎಲ್ಲಾ ಕಾಗದ ಪತ್ರಗಳನ್ನು ಸದನದ ಮುಂದೆ ಮಂಡಿಸಲಾಯಿತು.

3. ಅರ್ಜಿಗಳನ್ನೊಪ್ಪಿಸುವುದು

(ಅ) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮ) : ಮಾನ್ಯ ಅಧ್ಯಕ್ಷರೇ, ಬೆಂಗಳೂರಿನ ರಾಜಾಜಿನಗರದ ಶ್ರೀ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಕಾಲೇಜಿನಲ್ಲಿ ಅರ್ಥಶಾಸ್ತ್ರ ಉಪನ್ಯಾಸಕರಾಗಿ ಸೇವೆ ಸಲ್ಲಿಸಿರುವ ಶ್ರೀ ಎಂ. ಟಿ. ಮಂಜುನಾಥ್ ಇವರಿಗೆ ಆರ್ಥಿಕ ಮತ್ತು ಸೇವಾ ಸೌಲಭ್ಯಗಳನ್ನು ನೀಡುವ ಬಗ್ಗೆ ಅರ್ಜಿಯನ್ನೊಪ್ಪಿಸುತ್ತಿದ್ದೇನೆ.

(ಆ) ಶ್ರೀ ಚಂದ್ರಶೇಖರ ಸದಾಶಿವ ನಾಯಕ್ (ಗೋಕಾಕ್) : ಮಾನ್ಯ ಅಧ್ಯಕ್ಷರೇ, ಭೂ ದಾಖಲೆಗಳ ಇಲಾಖೆಯಲ್ಲಿ ತಪಾಸಕರಾಗಿ ಕಾರ್ಯ ನಿರ್ವಹಿಸುತ್ತಿರುವ ಶ್ರೀ ಎಸ್. ಬುಗಡಿಕಟ್ಟೆ ಇವರಿಗೆ ವೇತನ ನಿಗದಿಪಡಿಸುವ ಬಗ್ಗೆ ಅರ್ಜಿಯನ್ನೊಪ್ಪಿಸುತ್ತಿದ್ದೇನೆ.

(ಇ) ಶ್ರೀ ಪಿ. ಸಿ. ಸಿದ್ದನಗೌಡರ್ (ಕಲಘಟಗಿ) : ಮಾನ್ಯ ಅಧ್ಯಕ್ಷರೆ, ಧಾರವಾಡ ಜಿಲ್ಲೆಯ ಕಲಘಟಗಿ ತಾಲ್ಲೂಕಿನ ತಾವರಗೇರಿ ಗ್ರಾಮದ ಶ್ರೀ ಕಲ್ಲಪ್ಪ ನಾಗಪ್ಪ ಹೊನ್ನಿಹಳ್ಳಿ, ಗ್ರಾಮ ಲೆಕ್ಕಿಗರು, ಇವರ ಹುದ್ದೆಗೆ ನೀಡಿದ ರಾಜೀನಾಮೆಯನ್ನು ಸ್ವಇಚ್ಛಾ ನಿವೃತ್ತಿಯೆಂದು ಪರಿಗಣಿಸುವ ಬಗ್ಗೆ ಅರ್ಜಿಯನ್ನೊಪ್ಪಿಸುತ್ತಿದ್ದೇನೆ.

ಅಧ್ಯಕ್ಷರು : ಎಲ್ಲಾ ಅರ್ಜಿಗಳನ್ನು ಸದನಕ್ಕೆ ಒಪ್ಪಿಸಲಾಯಿತು.

4. ವರದಿಯನ್ನೊಪ್ಪಿಸುವುದು

ಶ್ರೀ ಚಂದ್ರಶೇಖರ ಸದಾಶಿವ ನಾಯಕ್ (ಗೋಕಾಕ್) : ಮಾನ್ಯ ಅಧ್ಯಕ್ಷರೇ, ಕರ್ನಾಟಕ ವಿಧಾನಸಭೆಯ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಅಧ್ಯಕ್ಷನಾದ ನಾನು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮವು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಜನರ ಕಲ್ಯಾಣಕ್ಕಾಗಿ ಹಮ್ಮಿಕೊಂಡಿರುವ ವಿವಿಧ ಯೋಜನೆಗಳ ಹಾಗೂ ಅವುಗಳ ಅನುಷ್ಠಾನದ ಬಗೆಗಿನ 11ನೇ ವರದಿಯನ್ನು ಸಭೆಗೆ ಒಪ್ಪಿಸುತ್ತಿದ್ದೇನೆ.

ಅಧ್ಯಕ್ಷರು : ವರಿದಯನ್ನೊಪ್ಪಿಸಲಾಯಿತು.

ಅಧ್ಯಕ್ಷರು : ರೆಡ್ಡಿಯವರೆ, ತಾವು ಕೊಟ್ಟಿರತಕ್ಕಂಥ ಪ್ರಿವಿಲೇಜ್ ನೋಟೀಸಿನ ಬಗ್ಗೆ ಪ್ರಾಸ್ತಾವಿಕ ಮನವಿಯನ್ನು ಸಲ್ಲಿಸಬಹುದು.

5. ಹಕ್ಕುಚ್ಯುತಿ ಪ್ರಸ್ತಾಪ

ವಿಷಯ : (ಅ) ಶಾಸಕರಾದ ಶ್ರೀ ಜಿ. ವಿ. ಶ್ರೀರಾಮರೆಡ್ಡಿಯವರು ತಮ್ಮ ಕ್ಷೇತ್ರದ ಕೆಲಸವನ್ನು ನಿರ್ವಹಿಸುವಲ್ಲಿ ಕಂದಾಯ ಮಂತ್ರಿಗಳಾದ ಶ್ರೀ ಸೋಮಶೇಖರ್‌ರವರು ಅಡ್ಡಿಪಡಿಸುತ್ತಿರುವುದು.